All India Radio: Bangalore
Regional Bulletin In Kannada
18.05.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

18.05.2025 / 2.30p.m.

ಮುಖ್ಯಾಂಶಗಳು

- ಹೊಸಪೇಟೆಯಲ್ಲಿ ಸರ್ಕಾರದ ಸಮರ್ಪಣೆ ಸಂಕಲ್ಪ ಸಮಾವೇಶ - ೧ ಲಕ್ಷದ ೧೧ ಸಾವಿರದ ೧೧೧ ಕುಟುಂಬಗಳಿಗೆ ಹಕ್ಕು ಪತ್ರ ವಿತರಣೆ
- ರಾಜಧಾನಿ ಬೆಂಗಳೂರಿನಲ್ಲಿ ಧಾರಾಕಾರ ಮಳೆ - ಹಲವೆಡೆ ಸಂಚಾರ ಅಸ್ತವ್ಯಸ್ತ - ಹಾನಿಗೊಳಗಾದ ಪ್ರದೇಶಗಳಲ್ಲಿ ಬಿಜೆಪಿ ನಾಯಕರಿಂದ ಪರಿಶೀಲನೆ
- ಅಮೃತ ಭಾರತ ರೈಲು ನಿಲ್ದಾಣ ಯೋಜನೆ - ಇದೇ ೨೨ ರಂದು ಪ್ರಧಾನಿ ಅವರಿಂದ ರಾಜ್ಯದ ೫ ನಿಲ್ದಾಣಗಳ ಲೋಕಾರ್ಪಣೆ
- ಕಬ್ಬು ಪೂರೈಸಿದ ರೈತರಿಗೆ ೧೫ ದಿನದೊಳಗೆ ಸಕ್ಕರೆ ಕಾರ್ಖಾನೆಗಳು ಹಣ ಪಾವತಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಸೂಚನೆ

<><><><>

ವಿಜಯನಗರದ ಹೊಸಪೇಟೆಯಲ್ಲಿ ರಾಜ್ಯ ಸರ್ಕಾರ ಎರಡು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಸಮರ್ಪಣೆ ಸಂಕಲ್ಪ ಸಮಾವೇಶ ನಡೆಯುತ್ತದೆ. ಸಮಾವೇಶದಲ್ಲಿ ೧ಲಕ್ಷದ ೧೧ ಸಾವಿರದ ೧೧೧ ಕುಟುಂಬಗಳಿಗೆ ಹಕ್ಕು ಪತ್ರಗಳ ವಿತರಣೆ ಮಾಡಿ ಮಾತನಾಡಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕರ್ನಾಟಕದಲ್ಲಿ ಭೂಮಿ ಇದ್ದವರಿಗೆ ಮಾಲಿಕತ್ವದ ಹಕ್ಕು ಇರಲಿಲ್ಲ. ಇಂದು ಕಂದಾಯ ಗ್ರಾಮದ ರೂಪದಲ್ಲಿ ಭೂಮಿಯ ಮಾಲೀಕತ್ವದ ಹಕ್ಕು ಅವರ ಕೈ ಸೇರಿದೆ ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರ ಇಂದು ವಿಜಯನಗರ ಜಿಲ್ಲೆಯನ್ನು ಪೋಡಿ ಮುಕ್ತ ಜಿಲ್ಲೆಯನ್ನಾಗಿಸಿದ್ದು ಸಂತಸ ತಂದಿದೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತಾನಾಡಿ ಕೊಟ್ಟ ಮಾತಿನಂತೆ ಸರ್ಕಾರ ನಡೆದುಕೊಂಡಿದೆ. ರಾಜ್ಯದಲ್ಲಿ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲಾಗಿದೆ ಎಂದು ತಿಳಿಸಿದರು. ಯಾವುದೇ ಕಾರಣಕ್ಕೂ ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಗ್ಯಾರಂಟಿ ಯೋಜನೆಗಳ ಬಗ್ಗೆ ಸರ್ಕಾರ ಮಾಡುತ್ತಿರುವ ಆರೋಪಗಳು ನಿರಾಧಾರ ಎಂದು ಸ್ಪಷ್ಟಡಿಸಿದ್ದಾರೆ.

ಸಮಾವೇಶದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ , ಉಪಮುಖ್ಯಮಂತ್ರಿ ಸೇರಿದಂತೆ ಸರ್ಕಾರದ ಬಹುತೇಕ ಸಚಿವರು ಉಪಸ್ಥಿತರಿದ್ದರು.

<><><><>

ರಾಜಧಾನಿ ಬೆಂಗಳೂರಿನಲ್ಲಿ ಮಳೆ ಮುಂದುವರೆದಿದ್ದು, ವಾಹನ ಸಂಚಾರ ಅಸ್ತವ್ಯಸ್ತವಾಗಿದೆ.

ಕಳೆದ ರಾತ್ರಿಯಿಡೀ ಧಾರಾಕಾರ ಮಳೆಯಾಗಿದ್ದು, ಹಲವು ಪ್ರದೇಶಗಳಲ್ಲಿ ನೀರು ನಿಂತಿದೆ. ಕೆಲವೆಡೆ ಮರಗಳು ಉರುಳಿದ್ದು, ಸಂಚಾರಕ್ಕೆ ಅಡ್ಡಿಯಾಗಿದೆ.

ಮಳೆಯಲ್ಲಿ ವಾಹನ ಚಾಲನೆ ಮಾಡುವಾಗ ವೇಗ ಕಡಿಮೆಮಾಡುವಂತೆ ಬೆಂಗಳೂರು ಸಂಚಾರ ಪೊಲೀಸರು ವಾಹನ ಸವಾರರಿಗೆ ಸೂಚಿಸಿದ್ದಾರೆ. ವಾಹನ ಸವಾರರು ಆದಷ್ಟು ನೀರು ನಿಲ್ಲುವ ಪ್ರದೇಶವನ್ನು ತಪ್ಪಿಸುವಂತೆ ಸಲಹೆ ನೀಡಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಮತ್ತು ಪ್ರತಿಪಕ್ಷ ನಾಯಕ ಆರ್ ಅಶೋಕ, ಚಲವಾದಿ ನಾರಾಯಣಸ್ವಾಮಿ ಸೇರಿದಂತೆ ಇತರೆ ನಾಯಕರು ಇಂದು ಸಿಲ್ಕ್ ಬೋರ್ಡ್‌ನಲ್ಲಿ ಮಳೆ ಪೀಡಿತ ಪ್ರದೇಶಗಳಲ್ಲಿ ಪರಿಶೀಲನೆ ನಡೆಸಿದರು.

ಇದೇ ವೇಳೆ ರಾಜ್ಯ ಸರ್ಕಾರ ಅಧಿಕಾರಕ್ಕೆ ೨ ವರ್ಷವಾದರೂ ಅಭಿವೃದ್ಧಿ ಕಾರ್ಯ ಮರೀಚಿಕೆಯಾಗಿದೆ ಎಂದು ದೂರಿದರು. ಕಾಂಗ್ರೆಸ್ ವಿರುದ್ಧ ಪೋಸ್ಟರ್‌ಗಳನ್ನು ಪ್ರದರ್ಶಿಸಿದರು.

ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರವಾಹ ಪೀಡಿತ ಪ್ರದೇಶಗಳ ನಗರ ಪ್ರದಕ್ಷಿಣೆ ನಡೆಸಲಿದ್ದಾರೆ. ಇದೇ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಭಾರಿ ಮಳೆಯಿಂದ ಬೆಂಗಳೂರಿನ ಜನ ತೀವ್ರ ತೊಂದರೆಗೆ ಒಳಗಾಗಿದ್ದಾರೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಭಾರಿ ಪ್ರಮಾಣದಲ್ಲಿ ಅನಾಹುತಗಳಾಗಿವೆ. ತೊಂದರೆಗೀಡಾಗಿರುವ ಜನರ ಬಗ್ಗೆ ಕಾಳಜಿ ತೋರದ ಸಿದ್ದರಾಮಯ್ಯ ನೇತೃತ್ವದ ಸರ್ಕಾರ, ವಿಜಯನಗರದಲ್ಲಿ ಎರಡು ವರ್ಷಗಳ ಆಡಳಿತ ಪೂರೈಸಿರುವ ಸಾಧನಾ ಸಮಾವೇಶ ಮಾಡುತ್ತಿರುವುದು ಖಂಡನೀಯ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತನಾಡಿ, ಭಾರಿ ಮಳೆಯಿಂದ ಬೆಂಗಳೂರು ಸಂಪೂರ್ಣವಾಗಿ ಜಲಾವೃತವಾಗಿದ್ದು ಜೀವಹಾನಿಯೂ ಉಂಟಾಗಿದ್ದು ಸರ್ಕಾರ ನಿರ್ಲಕ್ಷ್ಯ ತೋರಿದೆ ಎಂದು ದೂರಿದ್ದಾರೆ.

ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರವಾಹ ಪೀಡಿತ ಪ್ರದೇಶಗಳ ನಗರ ಪ್ರದಕ್ಷಿಣೆ ನಡೆಸಲಿದ್ದಾರೆ.

<><><><>

ಬೆಂಗಳೂರಿನ ರಾಜ ಕಾಲುವೆಗಳ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಸರ್ಕಾರ ಮುಂದಾಗಿದೆ ಎಂದು ಸಹಕಾರ ಸಚಿವ ಕೆ ಎನ್ ರಾಜಣ್ಣ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಹಲವಾರು ದಿನಗಳಿಂದ

ಮಳೆಯಾಗುತ್ತಿದ್ದು, ಸಮಸ್ಯೆ ಬಗೆಹರಿಸಲು ಹಾಗೂ ಶಾಶ್ವತ ಪರಿಹಾರ ಕಂಡುಕೊಂಡುಕೊಳ್ಳಲು ಸರ್ಕಾರ ಮುಂದಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಸಾಫ್ಟ್‌ವೇರ್ ಸಮಸ್ಯೆ ಹಿನ್ನೆಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯ ಹಣ ಕಳೆದ ಎರಡ್ಮೂರು ತಿಂಗಳುಗಳಿಂದ ವಿಳಂಬವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಚಿಕ್ಕಮಗಳುರು ಜಿಲ್ಲೆಯಾದ್ಯಂತ ನಿನ್ನೆ ಸಂಜೆಯಿಂದ ಧಾರಾಕಾರ ಮಳೆಯಾಗುತ್ತಿದ, ಜನ ಜೀವನ ಸಂಪೂರ್ಣ ಅಸ್ತ ವ್ಯಸ್ತಗೊಂಡಿದೆ. ಚಿಕ್ಕಮಗಳೂರು ನಗರ, ಕೊಪ್ಪ, ಕಳಸ, ಚಾರ್ಮಾಡಿ, ಕೊಟ್ಟಿಗೆಹಾರ ಸೇರಿದಂತೆ ಹಲವೆಡೆ ಭಾರಿ ಮಳೆಯಾಗುತ್ತಿದ್ದು ವಾಹನ ಸವಾರರಿಗೆ ಸಮಸ್ಯೆ ಎದುರಾಗಿದೆ. ಮುಂದಿನ ಎರಡು ದಿನಗಳು ಭಾರಿ ಮಳೆಯಾಗುವ ಹಿನ್ನೆಲೆಯಲ್ಲಿ ಜಿಲ್ಲೆಗೆ ನಾಳೆ ರೆಡ್ ಅರ್ಟ್ ಹಾಗು ನಾಡಿದ್ದು ಯೆಲ್ಲೋ ಅರ್ಟ್ ಘೊಷಣೆ ಮಾಡಲಾಗಿದೆ ಎಂದು ಜಿಲ್ಲಾ ವಿಪತು ನಿರ್ವಾಹಣಾ ಪ್ರಾಧಿಕಾರ ಪ್ರಕಟಣೆಯಲ್ಲಿ ತಿಳಿಸಿದೆ.

<><><><>

ಉತ್ತರಕನ್ನಡ ಜಿಲ್ಲೆಯ ಕಾರವಾರ, ಅಂಕೋಲಾ ಹಾಗೂ ಕುಮಟಾ ಸೇರಿದಂತೆ ಕರಾವಳಿ ಭಾಗಗಳಲ್ಲಿ ಕಳೆದ ರಾತ್ರಿಯಿಂದ ಮಳೆ ಸುರಿಯುತ್ತಿದೆ. ಜಿಲ್ಲೆಯಲ್ಲಿ ಇಂದು ಮತ್ತು ನಾಳೆ ರೆಡ್ ಅಲರ್ಟ್ ಘೋಷಿಸಲಾಗಿದ್ದು, ಈ ಹಿನ್ನಲೆಯಲ್ಲಿ ಈಗಾಗಲೇ ಉತ್ತರಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಕಾರವಾರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ ತೆರೆದಿದೆ.

ಸಾರ್ವಜನಿಕರು ಹಾಗೂ ಪ್ರವಾಸಿಗರಿಗೆ ಸಮುದ್ರತೀರಕ್ಕೆ ಹೋಗದಂತೆ ಸೂಚಿಸಲಾಗಿದೆ.

ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಜಿಲ್ಲಾಡಳಿತ ನಿರ್ದೇಶ ನೀಡಿದೆ.

<><><><>

ರಾಜ್ಯದ ವಿವಿಧೆಡೆ ಇಂದೂ ಕೂಡ ವ್ಯಾಪಕ ಮಳೆಯಾಗಿದೆ. ಗರಿಷ್ಠ ಉಷ್ಣಾಂಶದಲ್ಲಿ ಇಳಿಕೆಯಾಗಿದೆ.

ಅರಬ್ಬಿ ಸಮುದ್ರದಲ್ಲಿ ಕರ್ನಾಟಕದ ಕರಾವಳಿ ಭಾಗದಲ್ಲಿ ಇದೇ ೨೨ ರಂದು ವಾಯುಭಾರ ಕುಸಿತ ಉಂಟಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಮಳೆಯಾಗಲಿದೆ. ಬೆಂಗಳೂರಿನಲ್ಲಿ ಇನ್ನೂ ಮೂರು ದಿನ ಮಳೆಯಾಗಲಿದೆ. ಕರಾವಳಿ ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧೆಡೆ ಇನ್ನೂ ೫ ದಿನ ಮಳೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ ಎಸ್ ಪಾಟೀಲ್ ಅಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

<><><><>

ಅಮೃತ ಭಾರತ ರೈಲ್ವೆ ನಿಲ್ದಾಣ ಯೋಜನೆಯಡಿ ಮೊದಲ ಹಂತದಲ್ಲಿ ೫೦೦ ರೈಲ್ವೆ ನಿಲ್ದಾಣಗಳ ನವೀಕರಣ ಕಾಮಗಾರಿ ಆರಂಭವಾಗಿದ್ದು, ಈ ಪೈಕಿ ಆಧುನೀಕರಣಗೊಂಡ ೧೦೩ ರೈಲ್ವೆ ನಿಲ್ದಾಣಗಳನ್ನು ಪ್ರಧಾನಿ ನರೇಂದ್ರ ಮೋದಿ, ಇದೇ ೨೨ರಂದು ಲೋಕಾರ್ಪಣೆ ಮಾಡಲಿದ್ದಾರೆ.

ರಾಜ್ಯದ ಗೋಕಾಕ, ಧಾರವಾಡ, ಮುನಿರಾಬಾದ್, ಗದಗ, ಬಾಗಲಕೋಟ ರೈಲು ನಿಲ್ದಾಣಗಳನ್ನು ಈ ಯೋಜನೆಯಡಿ ಅಭಿವೃದ್ಧಿಪಡಿಸಲಾಗಿದೆ.

<><><><>

ಮಂಡ್ಯದಲ್ಲಿ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡುವ ರೈತರಿಗೆ ೧೫ ದಿನದೊಳಗೆ ಹಣ ಪಾವತಿಸುವಂತೆ ಜಿಲ್ಲಾಧಿಕಾರಿ ಡಾ ಕುಮಾರ ಸೂಚಿಸಿದ್ದಾರೆ.

ಸಕ್ಕರೆ ಕಾರ್ಖಾನೆಗಳು ಹಾಗೂ ಅಧಿಕಾರಿಗಳ ಜೊತೆ ಸಭೆ ನಡೆಸಿ ಮಾತನಾಡಿದ ಅವರು, ಕಳೆದ ಸಾಲಿನಲ್ಲಿ ನಿಗದಿತ ಅವಧಿಯಲ್ಲಿ ಹಣ ಪಾವತಿ ಮಾಡಿಲ್ಲ ಎಂದು ರೈತರು ದೂರುಗಳನ್ನು ಸಲ್ಲಿಸಿದ್ದು, ಈ ಬಾರಿ ಇದಕ್ಕೆ ಆಸ್ಪದ ನೀಡದಂತೆ ತಿಳಿಸಿದ್ದಾರೆ.

ಸಕ್ಕರೆ ಆಯುಕ್ತರು ನೀಡುವ ದಿನಾಂಕದಂದು ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಬ್ಬು ನುರಿಸುವ ಕೆಲಸಕ್ಕೆ ಚಾಲನೆ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಸಕ್ಕರೆ ಕಾರ್ಖಾನೆ ಮಾಲೀಕರು ತಮ್ಮ ವ್ಯಾಪ್ತಿಗೆ ನಿಗದಿಪಡಿಸಿರುವ ಕಬ್ಬನ್ನು ಮಾತ್ರ ಕಟಾವು ಮಾಡಲು ಅವಕಾಶವಿರುತ್ತದೆ. ಇದನ್ನು ಮನದಟ್ಟು ಮಾಡಿಕೊಂಡು ಕಾರ್ಖಾನೆಗಳಲ್ಲಿ ಸಣ್ಣ ಪುಟ್ಟ ಆಂತರಿಕ ತೊಂದರೆಗಳಿದ್ದಲ್ಲಿ ಈಗಲೇ ಸರಿಪಡಿಸಿಕೊಳ್ಳಿ ಎಂದು ಸೂಚಿಸಿದ್ದಾರೆ.

ಮೈ ಶುಗರ್ ಸಕ್ಕರೆ ಕಾರ್ಖಾನೆಯು ೪ ಲಕ್ಷದ ೨೦ ಸಾವಿರ ಮೆಟ್ರಿಕ್ ಟನ್ ಕಬ್ಬು ನುರಿಸುವ ಗುರಿ ಹೊಂದಿದೆ. ಪ್ರತಿ ದಿನ ೪೦೦೦ ಮೆಟ್ರಿಕ್ ಟನ್ ಕಬ್ಬು ನುರಿಸುವ ಸಾಮರ್ಥ್ಯವಿದೆ ಎಂದು ಸಕ್ಕರೆ ಕಾರ್ಖಾನೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದ್ದಾರೆ.

<><><><>

ಇದೇ ೨೭, ೨೮, ೨೯ರಂದು ಮೂರು ದಿನಗಳ ಕಾಲ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಮಂಡ್ಯ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಈ ವೇಳೆ ಸಾರ್ವಜನಿಕರ ಕುಂದು ಕೊರತೆ ಮತ್ತು ಸಮಸ್ಯೆಗಳನ್ನು ಆಲಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ ನಾಗರಿಕರು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದ್ದಾರೆ.

<><><><>

ಆಪರೇಷನ್ ಸಿಂಧೂರ ಯಶಸ್ವಿ ಹಿನ್ನೆಲೆಯಲ್ಲಿ ಭಾರತೀಯ ಸೇನೆಯೊಂದಿಗೆ ರಾಷ್ಟ್ರ ರಕ್ಷಣೆಗಾಗಿ ನಾಗರಿಕರು ಎಂಬ ಧ್ಯೇಯ ವಾಕ್ಯದೊಂದಿಗೆ ಹಾಸನದಲ್ಲಿ ಇಂದು ತಿರಂಗಾ ಯಾತ್ರೆ ನಡೆಯಿತು.

ಜಿಲ್ಲಾ ಕ್ರೀಡಾಂಗಣದಿಂದ ಆರಂಭಗೊಂಡ ತಿರಂಗಾ ಯಾತ್ರೆಯಲ್ಲಿ ಸಾವಿರಾರು ಸಂಖ್ಯೆಯ ನಾಗರಿಕರು, ವಿದ್ಯಾರ್ಥಿಗಳು, ಮಹಿಳೆಯರು ಭಾಗವಹಿಸಿ ಭಾರತೀಯ ಸೇನೆಯೊಂದಿಗೆ ನಾವಿದ್ದೇವೆ ಎಂಬ ಸಂದೇಶ ಸಾರಿದರು.

ಸೈನಿಕರಿಗೆ ಅವಮಾನ ಮಾಡುವ ಅಥವಾ ಅವರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸವನ್ನು ಯಾರು ಮಾಡಬಾರದು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಜೇ.ಗೌಡ ತಿಳಿಸಿದರು.

<><><><>